**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/12/ಇಸಿಎಸ್(2)/2017

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01,
ದಿನಾಂಕ:08-02-2018

ಸುತ್ತೋಲೆ

ವಿಷಯ: 2017 ರ ನವೆಂಬರ್/ಡಿಸೆಂಬರ್ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ ಫೋಟೋ ಪ್ರತಿ /ಮರು ಮೌಲ್ಯಮಾಪನದ ಅರ್ಜಿಗಳನ್ನು ಆನ್‌ಲೈನ್ ಅಪ್‌ಡೇಟ್ ಮಾಡುವ ಕುರಿತು

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/12/ಇಸಿಎಸ್(2)/2017 ದಿನಾಂಕ:24-01-2018

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸುತ್ತೋಲೆಯನ್ವಯ 2017 ರ ನವೆಂಬರ್/ಡಿಸೆಂಬರ್ ತಿಂಗಳನಲ್ಲಿ ನಡೆದ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ ಫೋಟೋ ಪ್ರತಿ /ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ದಿನಾಂಕ:05-02-2018 ರವರೆಗೆ ಕಾಲಾವಕಾಶ ನಿಗದಿಪಡಿಸಲಾಗಿತ್ತು. **ದಿನಾಂಕ:05-02-2018ರೊಳಗೆ ಫೋಟೋ ಪ್ರತಿ /ಮರು ಮೌಲ್ಯಮಾಪನ ಶುಲ್ಕ ಪಾವತಿಸಿ ಕಾರಣಾಂತರಗಳಿಂದ ಅರ್ಜಿಗಳ ವಿವರಗಳನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡದಿದ್ದಲ್ಲಿ ಅಂತಹ ವಿದ್ಯಾರ್ಥಿಗಳ ಅರ್ಜಿಗಳ ವಿವರಗಳನ್ನು ಮಾತ್ರ ದಿ:09-02-2018 ಸಂಜೆ 5-00 ಗಂಟೆಯ ಒಳಗೆ ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಲು ಅವಕಾಶ ನೀಡಲಾಗಿದೆ.** ವಿದ್ಯಾರ್ಥಿಗಳು ಹೊಸದಾಗಿ ಫೋಟೋ ಪ್ರತಿ / ಮರು ಮೌಲ್ಯಮಾಪನ ಶುಲ್ಕ ಪಾವತಿಸಲು ದಿ;05-02-2018 ರ ನಂತರ ಅವಕಾಶವಿರುವುದಿಲ್ಲವೆಂದು ತಿಳಿಸಲಾಗಿದೆ. ಪ್ರಾಚಾರ್ಯರುಗಳು ಈ ಸಂಬಂಧ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಲಾಗಿದೆ.

ಕಾರ್ಯದರ್ಶಿ

**ಇವರಿಗೆ,**

ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ: 1) ಇ- ಆಡಳಿತ –ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2) ಗಣಕ ಕೇಂದ್ರ – ವೆಬ್‌ಪೋರ್ಟಲ್/ www.btekarlinx.net ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
3) ಕಾರ್ಯದರ್ಶಿಯವರು ಆಪ್ತ ಶಾಖೆ